# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1710 (1964) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 24.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | Bengaluru-Mumbai Industrial Corridor ಮತ್ತು Chennai-Bengaluru Industrial Corridor ಈ ಯೋಜನೆಗಳ ಪ್ರಗತಿ ಕಾರ್ಯ ಯಾವ ಹಂತದಲ್ಲಿದೆ; | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಚೆನ್ನೈ-ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ ತುಮಕೂರಿನಲ್ಲಿ ಹಾಗೂ ಬೆಂಗಳೂರು-ಮುಂಬೈ ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ ಧಾರವಾಡದಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್/ ನೋಡ್‌ಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ.<br><br>**1) ತುಮಕೂರು ಇಂಡಸ್ಟ್ರಿಯಲ್ ಟೌನ್‌ಶಿಪ್/ನೋಡ್:**<br><br>ಸುಮಾರು 8313.00 ಎಕರೆ ಪ್ರದೇಶದಲ್ಲಿ 3 ಹಂತಗಳಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್‌ನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಮೊದಲನೇ ಹಂತವಾಗಿ (Phase-A) 1736.20 ಎಕರೆ ಪ್ರದೇಶದಲ್ಲಿ ಕೈಗಾರಿಕಾ ಟೌನ್‌ಶಿಪ್ ನಿರ್ಮಾಣ ಮಾಡಲು ದಿನಾಂಕ : 01.02.2023 ರಂದು ಮೆ॥ ಎಲ್&ಟಿ ಲಿಮಿಟೆಡ್ ರವರ ಜೊತೆ ಗುತ್ತಿಗೆ ಕರಾರು ನಿರ್ವಹಿಸಿದ್ದು, ಸದರಿ ಯೋಜನೆಯು ಪ್ರಗತಿಯಲ್ಲಿದ್ದು, ಯೋಜನೆಯನ್ನು ಸೆಪ್ಟಂಬರ್-2027 ರೊಳಗಾಗಿ ಪೂರ್ಣಗೊಳಿಸಲಾಗುತ್ತದೆ.<br><br>**2) ಧಾರವಾಡ ಇಂಡಸ್ಟ್ರಿಯಲ್ ಟೌನ್‌ಶಿಪ್/ನೋಡ್:**<br><br>ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಬೆಂಗಳೂರು-ಮುಂಬೈ ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ ಧಾರವಾಡದಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್/ ನೋಡ್‌ನ್ನು ಅಂದಾಜು 3000 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.<br><br>ಮೊದಲನೇ ಹಂತದಲ್ಲಿ 1000 ಎಕರೆ ಪ್ರದೇಶದಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರವು ರೂ.600 ಕೋಟಿ ಒದಗಿಸುತ್ತಿದ್ದು, 2026-27 ನೇ ಸಾಲಿನ ಆಯವ್ಯಯದಲ್ಲಿ ರೂ.200 ಕೋಟಿ ಒದಗಿಸಲಾಗಿದೆ.<br><br>ಇಂಡಸ್ಟ್ರಿಯಲ್ ಟೌನ್‌ಶಿಪ್‌ನ ಭೂಸ್ವಾಧೀನ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |

| | | |
|---|---|---|
| ಆ) | ಈ ಯೋಜನೆಗೆ ಇಲ್ಲಿಯವರೆಗೆ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ; ಇನ್ನೂ ಎಷ್ಟು ಭೂಮಿ ಸ್ವಾಧೀನಪಡಿಸಿಕೊಳ್ಳಬೇಕಾಗಿದೆ; | ವಸಂತನರಸಾಪುರ ಕೈಗಾರಿಕಾ ಪ್ರದೇಶ 4 & 5ನೇ ಹಂತದ ಯೋಜನೆಗಳಿಗಾಗಿ ತುಮಕೂರು ಜಿಲ್ಲೆ ತುಮಕೂರು/ಶಿರಾ ತಾಲ್ಲೂಕು, ಸೋರೆಕುಂಟೆ, ಗೌಡನಹಳ್ಳಿ, ಪಿ.ಗೊಲ್ಲಹಳ್ಳಿ ಇತರೆ ಗ್ರಾಮಗಳಲ್ಲಿ ಒಟ್ಟು 3693-12¼ ಎಕರೆ ಜಮೀನಿಗೆ ಕೆಐಎಡಿ ಕಾಯ್ದೆ ಕಲಂ 28(4)ರಡಿ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ.<br><br>ವಸಂತನರಸಾಪುರ ಕೈಗಾರಿಕಾ ಪ್ರದೇಶ 6ನೇ ಹಂತದ ಯೋಜನೆಗಾಗಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕು, ಸೋಮಸಾಗರ, ಕೆಂಪದಾಳಿಹಳ್ಳಿ, ನೆಲಹಾಳು & ಇತರೆ ಗ್ರಾಮಗಳಲ್ಲಿ ಒಟ್ಟು 4731-39½ ಎಕರೆ ಜಮೀನಿಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. ಸದರಿ ಜಮೀನಿಗೆ ಜೆ.ಎಂ.ಸಿ ಕಾರ್ಯ ಪ್ರಗತಿಯಲ್ಲಿದೆ.<br><br>ಅಲ್ಲದೇ, ಧಾರವಾಡದಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್/ನೋಡ್‌ನ್ನು ಅಂದಾಜು 3000 ಎಕರೆ ಪ್ರದೇಶಕ್ಕೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದು, ಅಂತಿಮ ಅಧಿಸೂಚನೆ ಹೊರಡಿಸಬೇಕಾಗಿರುತ್ತದೆ. |
| ಇ) | ಈ ಯೋಜನೆಯ ಅನುಷ್ಠಾನದಲ್ಲಿ ಎದುರಿಸಲಾಗುತ್ತಿರುವ ಸವಾಲುಗಳೇನು: ಸರ್ಕಾರ ಈ ಅಡಚಣೆಗಳನ್ನು ಪರಿಹರಿಸಲು ಯಾವ ರೀತಿ ಕ್ರಮ ಕೈಗೊಂಡಿದೆ. | ಚೆನ್ನೈ-ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ ಫೇಸ್-ಎ ಕಾಮಗಾರಿಯನ್ನು 1736.20 ಎಕರೆ ಪ್ರದೇಶದಲ್ಲಿ ಕೈಗೊಳ್ಳಲಾಗುತ್ತಿದ್ದು, ಸದರಿ ಪ್ರದೇಶದಲ್ಲಿ ಸುಮಾರು 452.00 ಎಕರೆ ಸರ್ಕಾರಿ ಜಮೀನನ್ನು ಒಳಗೊಂಡಿದ್ದು, ಕೆಲವು ಜಮೀನುಗಳ ಮಾಲೀಕರು ಮಾನ್ಯ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ಸದರಿ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಹಾಗೂ ಸರ್ಕಾರಿ ಜಮೀನನ್ನು ಹಸ್ತಾಂತರಿಸಿಕೊಂಡು ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ.<br><br>ಬೆಂಗಳೂರು-ಮುಂಬೈ- ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯ ಧಾರವಾಡ ನೋಡ್‌ನ ಜಮೀನಿಗೆ ಜೆ.ಎಂ.ಸಿ ಕಾರ್ಯ ಪ್ರಗತಿಯಲ್ಲಿದೆ. |
| ಈ) | ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ (ಬೆಳಗಾವಿ, ಕಲಬುರಗಿ, ಕೊಪ್ಪಳ, ರಾಯಚೂರು) ಹೊಸ ಕೈಗಾರಿಕಾ ಪಾರ್ಕ್ ನಿರ್ಮಿಸುವ ಸ್ಥಿತಿ ಯಾವ ಹಂತದಲ್ಲಿದೆ. | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಬೆಂಗಳೂರು-ಮುಂಬೈ ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ ಉತ್ತರ ಕರ್ನಾಟಕದ ಧಾರವಾಡದಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್/ನೋಡ್‌ನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. |

**ಸಿಐ 206 ಐಎಪಿ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು